**All India Radio: Bangalore**
**National Bulletin In Kannada**
**02.01.2026  7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**02.01.2026  7.35 am**

**<>><><*><><<>**

ಮುಖ್ಯಾಂಶಗಳು

**೧.	೨೦೨೭ ರ ಆಗಸ್ಟ್ ೧೫ ರವೇಳೆಗೆ ಭಾರತದಲ್ಲಿ ಮೊದಲ ಬುಲೆಟ್ ರೈಲು ಸೇವೆ ಆರಂಭ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ವಿಶ್ವಾಸ**

**೨.	ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದಿನಿಂದ ಎರಡು ದಿನಗಳ ತಮಿಳುನಾಡು ಪ್ರವಾಸ; ಚೆನ್ನೈ, ವೆಲ್ಲೂರಿನಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ**

**೩.	ಗೃಹಬಳಕೆಯ ಎಲ್‌ಪಿಜಿ ಸಿಲೆಂಡರ್ ಬೆಲೆಯಲ್ಲಿ ಯಾವುದೇ ಬದಲಾವಣೆ ಇಲ್ಲ - ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಸ್ಪಷ್ಟನೆ**

**೪.	ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯ ಆಯೋಜಿಸಿದ್ದ ಕೌಶಲ್ಯ ಮಂಥನ ಕಾರ್ಯಕ್ರಮ ಸಂಪನ್ನ**

**<>><><*><><<>**

೨೦೨೭ ರ ಆಗಸ್ಟ್ ೧೫ ರಂದು ಭಾರತ ತನ್ನ ಮೊದಲ ಬುಲೆಟ್ ರೈಲು ಸೇವೆಯನ್ನು ಪಡೆಯುವ ಸಾಧ್ಯತೆಯಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಘೋಷಿಸಿದ್ದಾರೆ.  ನವದೆಹಲಿಯಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಹಮದಾಬಾದ್ ಮತ್ತು ಮುಂಬೈ ನಡುವಿನ ಭಾರತದ ಮೊದಲ ಬುಲೆಟ್ ರೈಲು ಯೋಜನೆ ನಿರ್ಮಾಣ ಹಂತದಲ್ಲಿದೆ. ಮೊದಲಿಗೆ ಸೂರತ್‌ನಿಂದ ಬಿಲಿಮೋರಾ ಮತ್ತು ನಂತರ ವಾಪಿಯಿಂದ ಸೂರತ್‌ವರೆಗಿನ ಮೊದಲ ವಿಭಾಗವನ್ನು ಆರಂಭಿಸಲಾಗುವುದು ಎಂದು ಅವರು ಹೇಳಿದರು.

**ಧ್ವನಿ: ಅಶ್ವಿನಿ ವೈಷ್ಣವ್ ( ೨೩ ಸೆಕೆಂಡ್ಸ್)**

ದೇಶದ ಮೊದಲ ವಂದೇ ಭಾರತ್ ಸ್ಲೀಪರ್ ರೈಲು ಶೀಘ್ರದಲ್ಲೇ ಗುವಾಹಟಿ ಮತ್ತು ಕೋಲ್ಕತ್ತಾ ನಡುವೆ ಕಾರ್ಯನಿರ್ವಹಿಸಲಿದೆ. ಮುಂದಿನ ೧೫ ರಿಂದ ೨೦ ದಿನಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಈ ರೈಲನ್ನು ಉದ್ಘಾಟಿಸಲಿದ್ದಾರೆ ಎಂದು ಸಚಿವರು ತಿಳಿಸಿದರು.

**<>><><*><><<>**

ಉಪರಾಷ್ಟ್ರಪತಿ ಸಿ ಪಿ ರಾಧಾಕೃಷ್ಣನ್ ಅವರು ಇಂದಿನಿಂದ ಎರಡು ದಿನಗಳ ತಮಿಳುನಾಡು ಪ್ರವಾಸ ಕೈಗೊಳ್ಳಲಿದ್ದಾರೆ. ಪ್ರವಾಸದ ವೇಳೆ ಅವರು, ಚೆನ್ನೈ ಮತ್ತು ವೆಲ್ಲೂರಿನಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಚೆನ್ನೈನಲ್ಲಿರುವ ಡಾ.ಎಂ.ಜಿ.ಆರ್. ಶೈಕ್ಷಣಿಕ ಮತ್ತು ಸಂಶೋಧನಾ ಸಂಸ್ಥೆ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭದಲ್ಲಿ ಉಪರಾಷ್ಟ್ರಪತಿ ಪಾಲ್ಗೊಂಡು, ಭಾಷಣ ಮಾಡಲಿದ್ದಾರೆ. ಸಮಾರಂಭದಲ್ಲಿ ಪದವೀಧರರಿಗೆ ಪ್ರಮಾಣಪತ್ರಗಳನ್ನು ನೀಡಲಾಗುವುದು.  ನಂತರ ಉಪರಾಷ್ಟ್ರಪತಿಗಳು ನಗರದಲ್ಲಿ ನಡೆಯುವ ರಾಮ್ ನಾಥ್ ಗೋಯೆಂಕಾ ಸಾಹಿತ್ಯ ಸಮ್ಮಾನ್ ಸಮಾರಂಭದಲ್ಲಿ ಹಾಗೂ ಕಲೈವಾನರ್ ಅರಂಗಂನಲ್ಲಿ ಸಾರ್ವಜನಿಕ ಸ್ವಾಗತ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಇದರ ಜೊತೆಗೆ ಅವರು, ತಮಿಳುನಾಡು ರಾಜ್ಯಪಾಲರು ಚೆನ್ನೈ ಲೋಕ ಭವನದಲ್ಲಿ ಆಯೋಜಿಸಿರುವ ಸ್ವಾಗತ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.  ನಾಳೆ ಉಪರಷ್ಟ್ರಪತಿ, ವೆಲ್ಲೂರಿನಲ್ಲಿ ನಡೆಯುವ ಸಮಾರಂಭವೊಂದರಲ್ಲಿ ಭಾಗವಹಿಸಲಿದ್ದು, ಚೆನ್ನೈನಲ್ಲಿ ನಡೆಯುವ ೯ನೇ ಸಿದ್ಧ ದಿನಾಚರಣೆಯಲ್ಲಿ ಭಾಗವಹಿಸಲಿದ್ದಾರೆ.

**<>><><*><><<>**

ಬೆಂಗಳೂರಿನಿಂದ ಕನ್ಯಾಕುಮಾರಿಗೆ ಯಶಸ್ವಿಯಾಗಿ ಸೈಕ್ಲಿಂಗ್ ಮಾಡಿದ್ದಕ್ಕಾಗಿ ಎಸ್.ಸುರೇಶ್ ಕುಮಾರ್ ಅವರ ಗಮನಾರ್ಹ ಸಾಧನೆಯನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ.  ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಈ ಸಾಧನೆಯು

ಶ್ಲಾಘನೀಯ ಹಾಗೂ ಸ್ಫೂರ್ತಿದಾಯಕ ಮಾತ್ರವಲ್ಲದೆ, ಸುರೇಶ್ ಅವರ ದೃಢನಿಶ್ಚಯ ಮತ್ತು ಅಚಲ ಮನೋಭಾವಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದ್ದಾರೆ. ಇಂತಹ ಪ್ರಯತ್ನಗಳು ಸಮಾಜಕ್ಕೆ ಫಿಟ್‌ನೆಸ್ ಮತ್ತು ದೃಢಸಂಕಲ್ಪದ ಪ್ರಮುಖ ಸಂದೇಶವನ್ನು ನೀಡುತ್ತವೆ ಎಂದು ಪ್ರಧಾನಿ ತಿಳಿಸಿದ್ದಾರೆ.

**<>><><*><><<>**

ಗೃಹಬಳಕೆಯ ಎಲ್‌ಪಿಜಿ ಸಿಲೆಂಡರ್ ಬೆಲೆಯಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಸ್ಪಷ್ಟಪಡಿಸಿದೆ. ಗೃಹ ಬಳಕೆ ಎಲ್‌ಪಿಜಿ ಸಿಲೆಂಡರ್ ಬೆಲೆಯನ್ನು ೧೧೧ ರೂಪಾಯಿಗಳಷ್ಟು ಹೆಚ್ಚಿಸಲಾಗಿದೆ ಎಂಬ ಮಾಧ್ಯಮ ವರದಿಗಳನ್ನು ತಳ್ಳಿ ಹಾಕಿರುವ ಸಚಿವಾಲಯ, ವಾಣಿಜ್ಯ ಸಿಲೆಂಡರ್ ಬೆಲೆಯು ಅಂತಾರಾಷ್ಟ್ರೀಯ ಕಚ್ಚಾ ಅನಿಲ ಮತ್ತು ಸಂಬಂಧಿತ ದರಗಳ ಮೇಲೆ ಅವಲಂಬಿತವಾಗಿದ್ದು, ಆಗಾಗ್ಗೆ ಮಾರುಕಟ್ಟೆಯ ದರಗಳು ಬದಲಾಗುತ್ತವೆ. ಆದರೆ, ಗೃಹ ಬಳಕೆಯ ಸಿಲೆಂಡರ್ ದರದಲ್ಲಿ ಯಾವುದೇ ವ್ಯತ್ಯಾಸವಿಲ್ಲ ಎಂದು ತಿಳಿಸಿದೆ. ದೆಹಲಿಯಲ್ಲಿ ೧೪.೨ ಕೆಜಿ ಗೃಹ ಬಳಕೆ ಅಡುಗೆ ಅನಿಲ ಸಿಲೆಂಡರ್ ಬೆಲೆ ೯೫೦ ರೂಪಾಯಿಯಾಗಿದ್ದು, ಪ್ರಧಾನಮಂತ್ರಿ ಉಜ್ವಲ ಯೋಜನೆಯ ಫಲಾನುಭವಿಗಳಿಗೆ ಇದು ೫೫೩ ರೂಪಾಯಿ ಬೆಲೆಯಲ್ಲಿ ಲಭ್ಯವಿದೆ. ಇದು ಆಗಸ್ಟ್ ೨೦೨೩ ರಿಂದ ನವೆಂಬರ್ ೨೦೨೫ರವರೆಗೆ ಹೋಲಿಸಿದರೆ, ಶೇಕಡಾ ೩೯ ರಷ್ಟು ದರ ಕಡಿತವನ್ನು ಸೂಚಿಸುತ್ತದೆ. ಜನರಿಗೆ ಸುಸ್ಥಿರ ಇಂಧನ ಪೂರೈಕೆಗೆ  ಒತ್ತು ನೀಡಲಾಗಿದ್ದು, ದರ ಬದಲಾವಣೆ ಇಲ್ಲ ಎಂದು ಸಚಿವಾಲಯ ಮಾಹಿತಿ ನೀಡಿದೆ.

**<>><><*><><<>**

ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯ ಆಯೋಜಿಸಿದ್ದ ಕೌಶಲ್ಯ ಮಂಥನ ಕಾರ್ಯಕ್ರಮ ಸಂಪನ್ನಗೊಂಡಿದೆ. ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ರಾಜ್ಯ ಸಚಿವ ಜಯಂತ್ ಚೌಧರಿ ಅವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಮಟ್ಟದ ಅಧಿವೇಶನದೊಂದಿಗೆ ಈ ಕಾರ್ಯಕ್ರಮ ಮುಕ್ತಾಯಗೊಂಡಿತು. ಕಳೆದ ತಿಂಗಳು ೧೨ ರಿಂದ ೩೧ ರವರೆಗೆ ನಡೆದ ಸಮಾಲೋಚನೆಗಳು, ಸಂಸ್ಥೆಗಳು ಮತ್ತು ಪ್ರಮುಖ ಪಾಲುದಾರರ ಹಿರಿಯ ಅಧಿಕಾರಿಗಳನ್ನು ಒಟ್ಟುಗೂಡಿಸಿದ್ದು, ಭಾರತದ ಕೌಶಲ್ಯ ಪರಿಸರ ವ್ಯವಸ್ಥೆಯನ್ನು ಬಲಪಡಿಸುವ ಕುರಿತು ಚರ್ಚೆ ನಡೆಸಲಾಗಿದೆ. ಸ್ಪಂದನಾಶೀಲ, ಫಲಿತಾಂಶ-ಆಧಾರಿತ ಮತ್ತು ಭವಿಷ್ಯಕ್ಕೆ ಸಿದ್ಧವಾಗಿರುವ ಕೌಶಲ್ಯ ಚೌಕಟ್ಟನ್ನು ನಿರ್ಮಿಸುವ ಮೇಲೆ ಒತ್ತು ನೀಡುವ ಮೂಲಕ, ರಾಷ್ಟ್ರೀಯ ಉದ್ದೇಶಗಳೊಂದಿಗೆ ಹೊಂದಿಕೆಯಾಗುವ ಆದ್ಯತೆಯ ಸುಧಾರಣೆಗಳನ್ನು ಗುರುತಿಸುವುದರ ಮೇಲೆ ಚರ್ಚೆಗಳು ಗಮನಹರಿಸಿದವು.  ಸಾಂಸ್ಥಿಕ ಕಾರ್ಯವಿಧಾನಗಳನ್ನು ಬಲಪಡಿಸುವುದು, ವ್ಯವಸ್ಥೆಗಳನ್ನು ಸರಳೀಕರಿಸುವುದು ಮತ್ತು ಹೊಣೆಗಾರಿಕೆಯನ್ನು ಹೆಚ್ಚಿಸುವುದು ಚರ್ಚೆಯ ಪ್ರಮುಖ ಕ್ಷೇತ್ರಗಳಲ್ಲಿ ಸೇರಿವೆ ಎಂದು ಸಚಿವಾಲಯ ತಿಳಿಸಿದೆ.

**<>><><*><><<>**

ಇದೇ ಮೊದಲ ಬಾರಿಗೆ, ಭಾರತೀಯ ಸೇನೆಯ ಪ್ರಾಣಿಗಳ ತುಕಡಿಯು ೨೦೨೬ ರ ಗಣರಾಜ್ಯೋತ್ಸವದ ಪರೇಡ್‌ನಲ್ಲಿ ರಾಷ್ಟ್ರ ರಾಜಧಾನಿಯ ಕರ್ತವ್ಯ ಪಥದಲ್ಲಿ ಮೆರವಣಿಗೆ ನಡೆಸಲಿದೆ.  ಇದು ದೇಶದ ಕೆಲವು ಅತ್ಯಂತ ಸವಾಲಿನ ಭೂಪ್ರದೇಶಗಳಲ್ಲಿ ಮಿಲಿಟರಿ ಕಾರ್ಯಾಚರಣೆಗಳಲ್ಲಿ ಪ್ರಾಣಿಗಳು ವಹಿಸುವ ಪ್ರಮುಖ ಪಾತ್ರವನ್ನು ಪ್ರದರ್ಶಿಸುತ್ತದೆ.  ಈ ತುಕಡಿಯು, ಎರಡು ಬ್ಯಾಕ್ಟ್ರಿಯನ್ ಒಂಟೆಗಳು, ನಾಲ್ಕು ರಾಪ್ಟರ್‌ಗಳು, ನಾಲ್ಕು ಝನ್ಸ್ಕಾರ್ ಪೋನಿಗಳು, ೧೦ ಭಾರತೀಯ ತಳಿಯ ಸೇನಾ ಶ್ವಾನಗಳು ಮತ್ತು ಪ್ರಸ್ತುತ ಸೇವೆಯಲ್ಲಿರುವ ಆರು ಸಾಂಪ್ರದಾಯಿಕ ಮಿಲಿಟರಿ ಶ್ವಾನಗಳನ್ನು ಒಳಗೊಂಡಿರುತ್ತದೆ. ರಿಮೌಂಟ್ ಮತ್ತು ಪಶುವೈದ್ಯಕೀಯ ದಳದ ವಿಶೇಷ ಪ್ರಾಣಿ ತುಕಡಿಯು ರಾಷ್ಟ್ರದ ಗಡಿಗಳನ್ನು ರಕ್ಷಿಸುವಲ್ಲಿ ಪ್ರಾಣಿಗಳ ಕೊಡುಗೆಯನ್ನು ಎತ್ತಿ ತೋರಿಸುತ್ತದೆ ಎಂದು ಭಾರತೀಯ ಸೇನೆ ತಿಳಿಸಿದೆ.  ಮೀರತ್‌ನಲ್ಲಿರುವ ಆರ್‌ವಿಸಿ ಸೆಂಟರ್ ಮತ್ತು ಕಾಲೇಜಿನಿಂದ ಸಾಕಲ್ಪಟ್ಟ ಹಾಗೂ ತರಬೇತಿ ಪಡೆದ ಈ ಶ್ವಾನಗಳು ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳು, ಸ್ಫೋಟಕ ಮತ್ತು ಗಣಿ ಪತ್ತೆ, ಟ್ರ್ಯಾಕಿಂಗ್, ಕಾವಲು, ವಿಪತ್ತು ಪ್ರತಿಕ್ರಿಯೆ, ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಗಳಲ್ಲಿ ಸೈನಿಕರಿಗೆ ಬೆಂಬಲ ನೀಡುತ್ತವೆ.

**<>><><*><><<>**

ಮುಂದಿನ ತಿಂಗಳ ೧ ರಿಂದ ಜಾರಿಗೆ ಬರುವಂತೆ ಎಲ್ಲಾ ಹೊಸ ಫಾಸ್ಟ್‌ಟ್ಯಾಗ್ ಅವಳವಡಿಸಲಾದ ಕಾರುಗಳಿಗೆ ನೋ ಯುವರ್ ವೆಹಿಕಲ್-ಕೆವೈವಿ ಕಾರ್ಡ್‌ಗಳನ್ನು ಸ್ಥಗಿತಗೊಳಿಸುವುದಾಗಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಘೋಷಿಸಿದೆ.

ಸಾರ್ವಜನಿಕ ಅನುಕೂಲತೆಯನ್ನು ಹೆಚ್ಚಿಸಲು ಮತ್ತು ಹೆದ್ದಾರಿ ಬಳಕೆದಾರರು ಎದುರಿಸುತ್ತಿರುವ ಸಕ್ರಿಯಗೊಳಿಸುವಿಕೆಯ ನಂತರದ ಸಮಸ್ಯೆಯನ್ನು ನಿವಾರಿಸಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ ತಿಳಿಸಿದೆ. ದೂರುಗಳು ಬಂದ ನಿರ್ದಿಷ್ಟ ಸಂದರ್ಭಗಳಲ್ಲಿ ಮಾತ್ರ ಕೆವೈವಿ ಅಗತ್ಯವಿರುತ್ತದೆ ಮತ್ತು ಯಾವುದೇ ದೂರುಗಳ ಅನುಪಸ್ಥಿತಿಯಲ್ಲಿ, ಅಸ್ತಿತ್ವದಲ್ಲಿರುವ ಕಾರು ಫಾಸ್ಟ್‌ಟ್ಯಾಗ್‌ಗಳಿಗೆ ಯಾವುದೇ ಕೆವೈವಿ ಅಗತ್ಯವಿಲ್ಲ ಎಂದು ಸಚಿವಾಲಯ ತಿಳಿಸಿದೆ.

**<>><><*><><<>**

ನವದೆಹಲಿಯ ರಾಯ್ ಪಿಥೋರಾ ಸಾಂಸ್ಕೃತಿಕ ಸಂಕೀರ್ಣದಲ್ಲಿ ನಾಳೆ ನಡೆಯಲಿರುವ ಭಗವಾನ್ ಬುದ್ಧರ ಪವಿತ್ರ ಪಿಪ್ರಹ್ವಾ ಅವಶೇಷಗಳ ಅಂತಾರಾಷ್ಟ್ರೀಯ ಪ್ರದರ್ಶನವನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಲಿದ್ದಾರೆ. ಈ ಪ್ರದರ್ಶನವು ನವದೆಹಲಿಯ ರಾಷ್ಟ್ರೀಯ ವಸ್ತುಸಂಗ್ರಹಾಲಯ ಮತ್ತು ಕೋಲ್ಕತ್ತಾದ ಭಾರತೀಯ ವಸ್ತುಸಂಗ್ರಹಾಲಯದ ಸಂಗ್ರಹಗಳಲ್ಲಿ ಸಂರಕ್ಷಿಸಲಾಗಿರುವ ಪಿಪ್ರಹ್ವಾ ಅಧಿಕೃತ ಅವಶೇಷಗಳು ಮತ್ತು ಪುರಾತತ್ತ್ವ ವಸ್ತುಗಳನ್ನು ಒಂದು ಶತಮಾನಕ್ಕೂ ಹೆಚ್ಚು ಕಾಲದ ನಂತರ ಮೊದಲ ಬಾರಿಗೆ, ಒಂದೆಡೆ ಒಟ್ಟುಗೂಡಿಸುತ್ತದೆ. ೧೮೯೮ ರಲ್ಲಿ ಪತ್ತೆಯಾದ ಪಿಪ್ರಹ್ವಾ ಅವಶೇಷಗಳು ಆರಂಭಿಕ ಬೌದ್ಧಧರ್ಮದ ಪುರಾತತ್ತ್ವ ಅಧ್ಯಯನದಲ್ಲಿ ಕೇಂದ್ರ ಸ್ಥಾನವನ್ನು ಹೊಂದಿವೆ ಎಂದು ಪ್ರಧಾನ ಮಂತ್ರಿ ಕಚೇರಿ ತಿಳಿಸಿದೆ. ಇವು ಭಗವಾನ್ ಬುದ್ಧನಿಗೆ ನೇರವಾಗಿ ಸಂಬಂಧಿಸಿದ ಐತಿಹಾಸಿಕವಾಗಿ ಮಹತ್ವದ ಅವಶೇಷಗಳಲ್ಲಿ ಸೇರಿವೆ. ಪುರಾತತ್ತ್ವ ಶಾಸ್ತ್ರದ ಪುರಾವೆಗಳು ಪಿಪ್ರಹ್ವಾ ಸ್ಥಳವನ್ನು ಪ್ರಾಚೀನ ಕಪಿಲವಸ್ತುವಿನೊಂದಿಗೆ ಸಂಯೋಜಿಸುತ್ತವೆ. ಇದನ್ನು ಭಗವಾನ್ ಬುದ್ಧನು ವೈರಾಗ್ಯ ತಾಳುವ ಮೊದಲು ತನ್ನ ಆರಂಭಿಕ ಜೀವನವನ್ನು ಕಳೆದ ಸ್ಥಳವೆಂದು ಗುರುತಿಸಲಾಗಿದೆ. ಬೌದ್ಧ ಬೋಧನೆಗಳೊಂದಿಗೆ ಭಾರತೀಯ ನಾಗರಿಕತೆಯ ಸಂಪರ್ಕಗಳನ್ನು ಮತ್ತು ಆಧ್ಯಾತ್ಮಿಕ, ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸಲು ಸರ್ಕಾರದ ಪ್ರಯತ್ನಗಳನ್ನು ಈ ಪ್ರದರ್ಶನ ಒತ್ತಿಹೇಳುತ್ತದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**